ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 768 |
| ಮಾನ್ಯ ಸದಸ್ಯರ ಹೆಸರು | : ಶ್ರೀ ಸಿ.ಎನ್.ಮಂಜೇಗೌಡ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : 13/03/2025 |
| ಉತ್ತರಿಸುವ ಸಚಿವರು. | : ಗೃಹ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | Deepfake ಸೈಬರ್ ಕ್ರೈಮ್ ನಿಯಂತ್ರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; | Deepfake ಸೈಬರ್ ಕ್ರೈಮ್ ಸೇರಿದಂತೆ ಸೈಬರ್ ಅಪರಾಧಗಳನ್ನು ನಿಯಂತ್ರಿಸಲು ಸರ್ಕಾರವು ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿರುತ್ತದೆ:–<br>➢ ಸರ್ಕಾರವು ಸೈಬರ್ ವಂಚನೆಗೊಳಗಾದ ಶೋಷಿತರ ಅನುಕೂಲಕ್ಕಾಗಿ ಪ್ರತಿ ಜಿಲ್ಲೆಯಲ್ಲಿ ಹಾಗೂ ನಗರ ವ್ಯಾಪ್ತಿಯಲ್ಲಿ ಒಂದೊಂದು ಸೈಬರ್ ಪೊಲೀಸ್ ಠಾಣೆಗಳನ್ನು (ಸಿ.ಇ.ಎನ್ ಪೊಲೀಸ್ ಠಾಣೆ) ಸ್ಥಾಪಿಸಿರುತ್ತದೆ. ಒಟ್ಟು 43 ಸಿ.ಇ.ಎನ್ ಪೊಲೀಸ್ ಠಾಣೆಗಳು ಕಾರ್ಯನಿರ್ವಹಿಸುತ್ತಿವೆ.<br>➢ ಡಿವೈ.ಎಸ್.ಪಿ/ಎಸಿಪಿ ರವರುಗಳು ಪೊಲೀಸ್ ಠಾಣಾಧಿಕಾರಿಗಳಾಗಿರುತ್ತಾರೆ. ಸುಸಜ್ಜಿತ ವೈಜ್ಞಾನಿಕ ಉಪಕರಣಗಳನ್ನು ಬಳಸಿ ಸೈಬರ್ ಅಪರಾಧಗಳನ್ನು ಭೇಧಿಸುವಲ್ಲಿ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ನಿರಂತರ ಶ್ರಮವಹಿಸುತ್ತಿರುತ್ತಾರೆ.<br>➢ ಅಲ್ಲದೆ ಪ್ರತಿ ಪೊಲೀಸ್ ಠಾಣೆಗಳಲ್ಲಿಯೂ ಸಹ ದೂರನ್ನು ಸ್ವೀಕರಿಸುವಂತೆ ಸೂಕ್ತ ಕ್ರಮ ಕೈಗೊಳ್ಳಲಾಗಿದೆ.<br>➢ ಸೈಬರ್ ಕ್ರೈಂ ಅಪರಾಧಗಳಿಗೆ ಸಂಬಂಧಿಸಿದಂತೆ ಸರ್ಕಾರವು ಸಾರ್ವಜನಿಕರಲ್ಲಿ ಅರಿವು ಮೂಡಿಸುವಲ್ಲಿ ಬಹಳಷ್ಟು ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಎಲ್ಲಾ ವರ್ಗದ ಜನಗಳಿಗೂ ಸಾಮಾಜಿಕ ಜಾಲತಾಣ ಮತ್ತು ಎಲ್ಲಾ ಮಾಧ್ಯಮಗಳ ಮುಖಾಂತರ ಸಹ ಸಾಮಾನ್ಯ ಜನರಿಗೆ ಅನುಕೂಲವಾಗುವ ರೀತಿಯಲ್ಲಿ ಅರಿವು ಮೂಡಿಸಲಾಗುತ್ತಿರುತ್ತದೆ.<br>➢ ಸೈಬರ್ ಅಪರಾಧಗಳನ್ನು ತಡೆಗಟ್ಟುವ ಸಲುವಾಗಿ ಸಿಐಡಿ ಕಛೇರಿಯಲ್ಲಿ Centre for Cybercrime Investigation Training & Research (CCITR) ಘಟಕವನ್ನು ಪ್ರಾರಂಭಿಸಲಾಗಿದ್ದು, ಹಲವಾರು ತರಬೇತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ.<br>➢ ಬ್ಯಾಂಕಿಂಗ್ ಅಪರಾಧಗಳಿಗೆ ಸಂಬಂಧಿಸಿದಂತೆ ಆರ್.ಬಿ.ಐ ಅಧಿಕಾರಿಗಳು, ಪೊಲೀಸ್ ಅಧಿಕಾರಿಗಳು ಹಾಗೂ ಬ್ಯಾಂಕ್ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಬ್ಯಾಂಕಿಂಗ್ ಹಾಗೂ |

<table>
<tr>
<td></td>
<td></td>
<td>ಇತರೆ ಸೈಬರ್ ಅಪರಾಧಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಹಲವು ಪರಿಣಾಮಕಾರಿ ಸುರಕ್ಷತಾ ಕ್ರಮಗಳನ್ನು ಅನುಸರಿಸಿ ಸಾರ್ವಜನಿಕರ ಹಿತ ಕಾಪಾಡಲು ಕ್ರಮ ಕೈಗೊಳ್ಳಲಾಗುತ್ತಿದ.<br>➢ ಸಿಐಡಿಯ ಕಛೇರಿಯ ಸಿಸಿಐಟಿಆರ್ ವಿಭಾಗದಲ್ಲಿ 2019 ರಿಂದ ಸರ್ಕಾರಿ ಸಂಸ್ಥೆಗಳು ನ್ಯಾಯಾಧೀಶರುಗಳಿಗೆ, ಕಾನೂನು ಅಭಿಯೋಜಕರಿಗೆ, ಪೊಲೀಸ್ ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿಯವರುಗಳಿಗೆ ಸೈಬರ್ ಅಪರಾಧಗಳನ್ನು ತನಿಖೆ ಮತ್ತು ಪತ್ತೆ ಮಾಡುವ ಬಗ್ಗೆ ತರಬೇತಿಯನ್ನು ನೀಡಲಾಗಿರುತ್ತದೆ.<br>➢ ಸೈಬರ್ ಕ್ರೈಂ ಅಪರಾಧದ ಬಗ್ಗೆ ಸಾಮಾಜಿಕ ಜಾಲತಾಣಗಳಾದ ಫೇಸ್‌ಬುಕ್, ವಾಟ್ಸ್‌ಆಪ್ ಹಾಗೂ ಟ್ವೀಟರ್‌ಗಳ ಮೂಲಕ ಸೈಬರ್ ಜಾಗೃತಿಯ ಸಂದೇಶಗಳನ್ನು ಸೈಬರ್ ಕ್ರೈಂ ಅಪರಾಧ ಮತ್ತು ತನಿಖೆಗಾಗಿ ಸಂಬಂಧಿಸಿದಂತೆ (Cyber Investigation Manual) ಸೈಬರ್ ಅಪರಾಧಗಳ ತನಿಖೆ ಕೈಪಿಡಿಯನ್ನು ಮುದ್ರಿಸಿ ರಾಜ್ಯದ ಎಲ್ಲಾ ಘಟಕಗಳಿಗೆ, ಪೊಲೀಸ್ ಠಾಣೆಗಳಿಗೆ ಮತ್ತು ಇತರೆ ಕಾನೂನು ಜಾರಿ ಸಂಸ್ಥೆಗಳಿಗೆ ಕಳುಹಿಸಿಕೊಡಲಾಗಿದೆ.<br>➢ ರಾಜ್ಯದಲ್ಲಿ ಸುಸಜ್ಜಿತವಾದ ನ್ಯಾಯವಿಜ್ಞಾನ ಪ್ರಯೋಗಾಲಯವು ಕಾರ್ಯನಿರ್ವಹಿಸುತ್ತಿದ್ದು, ಸೈಬರ್ ಕ್ರೈಂ ಆಪರಾಧಗಳಲ್ಲಿ ತನಿಖೆಗೆ ಸಂಬಂಧಿಸಿದಂತೆ ತಾಂತ್ರಿಕ ನೇರವು ನೀಡಲಾಗುತ್ತಿದೆ.</td>
</tr>
<tr>
<td>ಆ)</td>
<td>ಈವರೆಗೆ ದಾಖಲಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು? (ಕಳೆದ ಐದು ವರ್ಷಗಳ ಮಾಹಿತಿ ಒದಗಿಸುವುದು)</td>
<td>Deepfake ಸೈಬರ್ ಕ್ರೈಮ್ ಅಡಿಯಲ್ಲಿ ರಾಜ್ಯದಲ್ಲಿ ಒಟ್ಟು 12 ಪ್ರಕರಣಗಳು ವರದಿಯಾಗಿದ್ದು, ವರ್ಷವಾರು ಪ್ರಕರಣಗಳ ವಿವರಗಳು ಈ ಕೆಳಕಂಡಂತಿದೆ:-<br><table>
<tr><th>ವರ್ಷ</th><th>Deepfake ಸೈಬರ್ ಕ್ರೈಮ್ ಅಡಿಯಲ್ಲಿ ದಾಖಲಿಸಿರುವ ಎಫ್.ಐ.ಆರ್. ಸಂಖ್ಯೆ</th></tr>
<tr><td>2022 ಮತ್ತು 2023</td><td>0</td></tr>
<tr><td>2024</td><td>7</td></tr>
<tr><td>2025 (ಫೆಬ್ರವರಿ-28)</td><td>5</td></tr>
</table></td>
</tr>
</table>

ಸಂಖ್ಯೆ:ಹೆಚ್‌ಡಿ 21 ಪಿಸಿಕ್ಯೂ 2025

(ಡಾ: ಜಿ.ಪರಮೇಶ್ವರ)
ಗೃಹ ಸಚಿವರು